# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 687(631) |
| ಮಾನ್ಯ ಸದಸ್ಯರ ಹೆಸರು: | ಶ್ರೀ ತಿಪ್ಪಣ್ಣಪ್ಪ ಕಮಕನೂರ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು: | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 18.08.2025 |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರತಿ ವರ್ಷ ವಿವಿಧ ಕಾಲೇಜುಗಳಲ್ಲಿ ಪದವಿ ಮುಗಿಸಿ ಹೊರಬರುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? | 2024-25ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಸಾರ್ವಜನಿಕ, ಖಾಸಗಿ ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳಿಂದ ಒಟ್ಟು 10,43,650 ವಿದ್ಯಾರ್ಥಿಗಳು ಸ್ನಾತಕ, ಸ್ನಾತಕೊತ್ತರ ಪದವಿ ಸೇರಿದಂತೆ ಇನ್ನಿತರ ಉನ್ನತ ಶಿಕ್ಷಣವನ್ನು ಪೂರೈಸಿರುತ್ತಾರೆ. |
| (ಆ) | ಈ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅವರುಗಳು ಸ್ವಾವಲಂಬಿ ಬದುಕು ನಡೆಸಲು ಆಯಾ ಪದವಿ ಅಂತಿಮ ವರ್ಷದಲ್ಲಿ ಅವರಿಗೆ ಮುಂದಿನ ಯೋಜನೆಯ ಕಾರ್ಯಕ್ರಮ ರೂಪಿಸಲು ಸರ್ಕಾರ ಮುಂದಾಗುವುದೇ? | ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾಹಿತಿ ತಂತ್ರಜ್ಞಾನ, ವಾಣಿಜ್ಯೋದ್ಯಮ ಸೇರಿದಂತೆ ಇನ್ನಿತರ ಎಲ್ಲಾ ಖಾಸಗಿ ಮತ್ತು ಸಾರ್ವಜನಿಕ ಕ್ಷೇತ್ರದ ವಿವಿಧ ರಂಗಗಳಲ್ಲಿ ಉದ್ಯೋಗ ಪಡೆದುಕೊಳ್ಳಲು ಅನುವಾಗುವಂತೆ ಈ ಕೆಳಕಂಡ ಕೆಲವು ಪ್ರಮುಖ ಕೌಶಲ್ಯ ಕಾರ್ಯಕ್ರಮಗಳನ್ನು ಉನ್ನತ ಶಿಕ್ಷಣ ಇಲಾಖೆ ವತಿಯಿಂದ ಪದವಿ ಹಂತದಲ್ಲೇ ನೀಡಲಾಗುತ್ತಿದೆ.<br><br>1) **ಚಿವೆನಿಂಗ್ ಕರ್ನಾಟಕ** ಸ್ನಾತಕೋತ್ತರ ವಿದ್ಯಾರ್ಥಿವೇತನದ ಮೂಲಕ ಪ್ರತಿ ವರ್ಷ ರಾಜ್ಯದ 5 ಜನ ಮಹಿಳಾ ಪದವೀಧರೆಯರಿಗೆ, ಬ್ರಿಟನ್ನಿನಲ್ಲಿ ತಮ್ಮ ಆಯ್ಕೆಯ ಯಾವುದಾದರೂ ಒಂದು ವರ್ಷದ ಸ್ನಾತಕೋತ್ತರ ವ್ಯಾಸಂಗಕ್ಕೆ ತಗುಲುವ ಸಂಪೂರ್ಣ ವೆಚ್ಚವನ್ನು ಭರಿಸಲಾಗುತ್ತದೆ. ಈ ವಿದ್ಯಾರ್ಥಿವೇತನದ ಸ್ಥಾಪನೆಯ ಮೂಲಕ ಸರ್ಕಾರ ಮಹಿಳಾ ಶಿಕ್ಷಣಕ್ಕೆ ಆದ್ಯತೆ ಮತ್ತು ಪ್ರೋತ್ಸಾಹವನ್ನು ನೀಡುತ್ತಿದೆ.<br><br>2) **'Apprenticeship Embedded Degree Program'** ಎನ್ನುವ ಪದವಿ ಕಾರ್ಯಕ್ರಮದಲ್ಲಿ |

| | | |
|---|---|---|
| | | ಪ್ರಪ್ರಥಮ ಬಾರಿಗೆ, ಸ್ಟೈಪೆಂಡ್ ಸಹಿತ Apprenticeship ಅನ್ನು ಅಂತರ್ಗತಗೊಳಿಸಿ, BFSI, Logistics, e-Commerce Operations ಮತ್ತು Retail ಕೌಶಲ್ಯಾಧಾರಿತ ಬಿ.ಕಾಂ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ. ಇದರಿಂದ ಪದವಿ ನಂತರದಲ್ಲಿ ರಿಟೈಲ್ ಕ್ಷೇತ್ರ ಹಾಗೂ ವಾಣಿಜ್ಯ ಕ್ಷೇತ್ರದಲ್ಲಿ ಯುವಕರಿಗೆ ಉದ್ಯೋಗಾವಕಾಶ ದೊರಕಲು ಸಹಾಯಕವಾಗುತ್ತದೆ.<br><br>3) **ಕಲಿಕೆ ಜೊತೆ ಕೌಶಲ್ಯ:** ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳ ಉದ್ಯೋಗಾರ್ಹತೆಯನ್ನು ವರ್ಧಿಸುವ ಉದ್ದೇಶದಿಂದ **"ಕಲಿಕೆ ಜೊತೆ ಕೌಶಲ್ಯ"** ಎಂಬ ವಿನೂತನ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮವನ್ನು, ವಿಶ್ವವಿದ್ಯಾಲಯಗಳ ಪಠ್ಯಕ್ರಮದಲ್ಲಿ ಅಂತರ್ಗತಗೊಳಿಸಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಸಹಭಾಗಿತ್ವದಲ್ಲಿ ಸರ್ಕಾರಿ ಪದವಿ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅಂತಿಮ ಸೆಮಿಸ್ಟರ್ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>4) **ಪ್ರೇರಣಾ ಕಾರ್ಯಕ್ರಮ**: ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ ಗಣ್ಯರಿಂದ ಮಾರ್ಗದರ್ಶನ ದೊರಕಿಸಲು 'ಪ್ರೇರಣಾ ಮೆಂಟರ್ಶಿಪ್' ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>5) **ಆರೋಹಣ್ 2024 - ಉಪನ್ಯಾಸ ಸರಣಿ:** ಸರ್ಕಾರಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಅತ್ಯುತ್ತಮ ಅಭ್ಯಾಸಗಳನ್ನು, ಜ್ಞಾನವನ್ನು ಮತ್ತು ಸಂಶೋಧನಾ ಕೌಶಲ್ಯವನ್ನು ಇತರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳೊಂದಿಗೆ ಹಂಚಿಕೊಳ್ಳುವ ಉದ್ದೇಶದಿಂದ 'ಆರೋಹಣ್ 2024' ಎನ್ನುವ ಉಪನ್ಯಾಸ ಸರಣಿ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆ.<br><br>ಮೇಲ್ಕಂಡ ಪ್ರಮುಖ ಕಾರ್ಯಕ್ರಮಗಳು ಸೇರಿದಂತೆ ಹಲವಾರು ಕಾರ್ಯಕ್ರಮಗಳ ಮೂಲಕ ಪದವಿ ಶಿಕ್ಷಣ |

| | | |
|---|---|---|
| | | ಪಡೆಯುತ್ತಿರುವ ವಿದ್ಯಾರ್ಥಿಗಳನ್ನು ಮುಂದಿನ ವೃತ್ತಿ ಜೀವನಕ್ಕೆ ಅಣಿಗೊಳಿಸಲಾಗುತ್ತಿದ್ದು, ಸ್ಪರ್ಧಾತ್ಮಕ ಜಗತ್ತಿನ ಅಗತ್ಯಕ್ಕೆ ತಕ್ಕಂತೆ ಕೌಶಲ್ಯಯುಕ್ತ ಮಾನವ ಸಂಪನ್ಮೂಲ ವ್ಯಕ್ತಿಗಳನ್ನಾಗಿ ರೂಪಿಸಲಾಗುತ್ತಿದೆ. |
| (ಇ) | ರಾಜ್ಯದಲ್ಲಿ ನಿರುದ್ಯೋಗಿ ಪದವೀಧರರನ್ನು ಈ ಮಾನವ ಸಂಪನ್ಮೂಲವನ್ನು ಸದ್ಬಳಕೆ ಮಾಡಿಕೊಳ್ಳಲು ಸರ್ಕಾರದ ಮುಂದಿರುವ ಯೋಜನೆಗಳೇನು? | ವಿಶ್ವವಿದ್ಯಾಲಯಗಳಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಉದ್ಯಮಶೀಲ ಕೌಶಲ್ಯ ತರಬೇತಿ, ವೃತ್ತಿಪರ ಕೌಶಲ್ಯ ತರಬೇತಿ ನೀಡುವುದರೊಂದಿಗೆ ಸರ್ಕಾರಿ/ಅರೆ ಸರ್ಕಾರಿ/ಖಾಸಗಿ ಸಂಸ್ಥೆಗಳ ಸಹಯೋಗದೊಂದಿಗೆ ಉದ್ಯೋಗ ಮೇಳಗಳನ್ನು ಆಯೋಜಿಸಿ, ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮಕೈಗೊಳ್ಳಲಾಗುತ್ತಿದೆ.<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಭಾಗಿತ್ವದಲ್ಲಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ನಿರುದ್ಯೋಗಿ ಪದವೀಧರರ ಕೌಶಲ್ಯವನ್ನು ವೃದ್ಧಿಸುವುದರೊಂದಿಗೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸರ್ಕಾರದ ಅಧೀನದ ವಿವಿಧ ಸಾರ್ವಜನಿಕ ಉದ್ದಿಮೆಗಳು, ನಿಗಮ-ಮಂಡಳಿ, ಇನ್ನಿತರ ಎಲ್ಲಾ ಸಾರ್ವಜನಿಕ ಉದ್ಯೋಗಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ. |

ಇಡಿ19/2025/ಇಡಿ

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು